**All India Radio: Bangalore**
**Regional Bulletin In Kannada**
**10.04.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

****************

ಮುಖ್ಯಾಂಶಗಳು

೧. ರಾಜ್ಯದಲ್ಲಿ ಪೋಡಿ ಮುಕ್ತ ಗ್ರಾಮಗಳ ಜೊತೆಗೆ ಸರ್ವೇ ಕಾರ್ಯ ಪೂರ್ಣಗೊಳಿಸಿ - ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ

೨. ೨೦೨೮ರ ವೇಳೆಗೆ ತುಮಕೂರಿಗೆ ಎತ್ತಿನಹೊಳೆ ನೀರು - ಗೃಹ ಸಚಿವ ಡಾ. ಜಿ. ಪರಮೇಶ್ವರ್

೩. ಅಗತ್ಯವಸ್ತುಗಳ ಬೆಲೆ ಏರಿಕೆ ಖಂಡಿಸಿ ಬಿಜೆಪಿ ಪ್ರತಿಭಟನೆ; ಉಡುಪಿಯಲ್ಲಿ ಜನಾಕ್ರೋಶ ಯಾತ್ರೆ

೪. ನಾಡಿನೆಲ್ಲೆಡೆ ಮಹಾವೀರ ಜಯಂತಿ ಆಚರಣೆ; ಮುಖ್ಯಮಂತ್ರಿ ಸೇರಿದಂತೆ ಗಣ್ಯರಿಂದ ಶುಭಾಶಯ

೫. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು - ಡೆಲ್ಲಿ ಕ್ಯಾಪಿಟಲ್ಸ್ ತಂಡ ಮುಖಾಮುಖಿ

****************

ಕಂದಾಯ ಇಲಾಖೆ ಸರ್ಕಾರಕ್ಕೆ ಮಾತೃ ಇಲಾಖೆ ಇದ್ದಂತೆ. ಹೀಗಾಗಿ ರಾಜ್ಯದಲ್ಲಿ ಸರ್ವೇ ಕಾರ್ಯ ಪೂರ್ಣಗೊಳ್ಳಬೇಕು ಹಾಗೂ ಪೋಡಿಮುಕ್ತ ಗ್ರಾಮಗಳಾಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ವಿಧಾನಸೌಧದ ಮೆಟ್ಟಿಲುಗಳ ಮೇಲೆ ನಡೆದ ಭೂಮಾಪನ, ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ ಹಾಗೂ ಇಲಾಖೆಯ ನೌಕರರ ಸಂಘಗಳ ೩೬ನೇ ರಾಷ್ಟ್ರೀಯ

ಭೂಮಾಪನಾ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು ಪರವಾನಗಿ ಭೂಮಾಪಕರ ಕಾಯಂ ಮಾಡಲು ಗಂಭೀರ ಕ್ರಮದ ಜೊತೆಗೆ ೩೮ ಎಎಲ್‌ಆರ್‌ಗಳನ್ನು ನೇಮಕ ಮಾಡಲಾಗುವುದು ಎಂದು ಘೋಷಿಸಿದ್ದಾರೆ.

***ಧ್ವನಿ*** ಮುಖ್ಯಮಂತ್ರಿ

ಕಂದಾಯ ಇಲಾಖೆ ಅಚ್ಚುಕಟ್ಟಾಗಿ ಕೆಲಸ ಮಾಡಿದರೆ ರೈತ ಸಮುದಾಯ ನೆಮ್ಮದಿಯಾಗಿರಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಕೃಷ್ಣಬೈರೇಗೌಡರ ನೇತೃತ್ವದಲ್ಲಿ ಕಂದಾಯ ಇಲಾಖೆಯಲ್ಲಿ ಅತ್ಯುತ್ತಮ ಕೆಲಸಗಳಾಗುತ್ತಿವೆ. ಕೃಷ್ಣಬೈರೇಗೌಡರು ಇಲಾಖೆಯನ್ನು ಚೆನ್ನಾಗಿ ಅರ್ಥಮಾಡಿಕೊಂಡು, ನಾಲಗೆ ತುದಿಯಲ್ಲಿ ಅಂಕಿ ಅಂಶ ಇಟ್ಟುಕೊಂಡಿರುವ ಸಮರ್ಥ ಮಂತ್ರಿ ಎಂದು ಶ್ಲಾಘಿಸಿದ್ದಾರೆ.

ತಹಶೀಲ್ದಾರ್, ಎಸಿ ಕಚೇರಿಗಳಲ್ಲಿ ಸುಗಮವಾಗಿ, ಪ್ರಾಮಾಣಿಕವಾಗಿ ಕೆಲಸಗಳು ಆದರೆ ನಾಡಿನ ಜನತೆ, ರೈತ ಸಮುದಾಯ ಅತ್ಯಂತ ನೆಮ್ಮದಿಯಾಗಿರಲಿದೆ ಎಂದು ಹೇಳಿದ್ದಾರೆ.

ರಾಜ್ಯದಲ್ಲಿ ಕೆರೆ ಕಟ್ಟೆಗಳ ಒತ್ತುವರಿ ತೆರವುಗೊಳಿಸಬೇಕು, ಪೋಡಿ ಮುಕ್ತ ಗ್ರಾಮಗಳಾಗಬೇಕು. ಇದಕ್ಕಾಗಿ ಇಲಾಖೆಯ ಪ್ರತಿಯೊಬ್ಬರೂ ಪ್ರಾಮಾಣಿಕವಾಗಿ ಶ್ರಮಿಸುವಂತೆ ತಿಳಿಸಿದ್ದಾರೆ.

ರಾಷ್ಟ್ರೀಯ ಭೂಮಾಪನ ದಿನಾಚರಣೆಯನ್ನು ಪ್ರತೀ ವರ್ಷ ಆಚರಿಸಬೇಕು ಎಂದು ಇದೇ ವೇಳೆ ಸೂಚಿಸಿದ್ದಾರೆ.

***************

೨೦೨೮ರ ಜೂನ್ ವೇಳೆಗೆ ಎತ್ತಿನಹೊಳೆ ನೀರು ತುಮಕೂರು ತಲುಪಲಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ತುಮಕೂರಿನ ಸಿದ್ಧಗಂಗಾ ಮಠಕ್ಕೆ ಭೇಟಿ ನೀಡಿದ ಅವರು, ಈ ಕುರಿತಂತೆ ಸಿದ್ದಲಿಂಗ ಸ್ವಾಮೀಜಿಗೆ ಮಾಹಿತಿ ನೀಡಿದ್ದಾರೆ.

ಈ ವರ್ಷದ ಜೂನ್ ತಿಂಗಳೊಳಗೆ ಅರಸಿಕೆರೆಗೆ ಎತ್ತಿನಹೊಳೆ ತಲುಪಲಿದೆ. ಕೊರಟಗೆರೆ ತಾಲೂಕಿನ ೭೯ ಕೆರೆಗಳಿಗೆ ನೀರು ತುಂಬಿಸಲು ಅನುಮತಿ ಸಿಕ್ಕಿದೆ ಎಂದು ಹೇಳಿದ್ದಾರೆ.

ಪಾವಗಡ ತಾಲೂಕಿನ ೩೫೫ ಗ್ರಾಮಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗುವುದು ಎಂದು ತಿಳಿಸಿದ್ದಾರೆ. ಇದೇ ವೇಳೆ ಸಿದ್ದಲಿಂಗಾ ಸ್ವಾಮೀಜಿ ಸಚಿವರ ಬಳಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆರೋಗ್ಯ ವಿಚಾರಿಸಿದ್ದಾರೆ.

***************

ತುಮಕೂರು ಜಿಲ್ಲೆಯ ಗುಬ್ಬಿ ತಾಲೂಕಿನ ನಿಟ್ಟೂರು ರೈಲ್ವೇ ನಿಲ್ದಾಣ ಯಾರ್ಡ್‌ನಲ್ಲಿ ೫೦ ಕೋಟಿ ೮೭ ಲಕ್ಷ ರೂಪಾಯಿ ವೆಚ್ಚದಲ್ಲಿ ಮೇಲ್ಸೇತುವೆ ನಿರ್ಮಾಣ ಕಾಮಗಾರಿಗೆ ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ಶಂಕುಸ್ಥಾಪನೆ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು, ತುಮಕೂರಿನಿಂದ ಗುಬ್ಬಿಯವರೆಗೆ ೪ ಪಥ ರಸ್ತೆ ನಿರ್ಮಾಣ ಮಾಡಲಾಗುವುದು ಎಂದು ಹೇಳಿದರು. ದೇಶದಲ್ಲಿ ಶುದ್ಧ ಕುಡಿಯುವ ನೀರು, ಶೌಚಾಲಯಗಳ ನಿರ್ಮಾಣ ಹಾಗೂ ಸಾಮಾನ್ಯ ಜನರಿಗೆ ನೆರವು ನೀಡುವುದು ಪ್ರಧಾನಿ ನರೇಂದ್ರ ಮೋದಿಯವರ ಆಶಯವಾಗಿದೆ. ಇನ್ನೆರಡು ತಿಂಗಳಿನಲ್ಲಿ ಶುದ್ದ ಕುಡಿಯುವ ನೀರನ್ನು ಒದಗಿಸುವ ಮೂಲಕ ತುಮಕೂರನ್ನು ಮಾದರಿ ಜಿಲ್ಲೆಯನ್ನಾಗಿಸಲು ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.

***************

ಹಾಲು, ಬಸ್ ಪ್ರಯಾಣದರ ಏರಿಕೆ ಖಂಡಿಸಿ, ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಹಮ್ಮಿಕೊಂಡಿರುವ ಜನಾಕ್ರೋಶ ಯಾತ್ರೆ ಉಡುಪಿ ತಲುಪಿದೆ. ಉಡುಪಿಯಲ್ಲಿ ಬೆಲೆ ಏರಿಕೆ ವಿರುದ್ಧ ಪ್ರತಿಭಟನೆ ನಡೆಸಿದ ಬಿಜೆಪಿ ನಾಯಕರು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬಹಿರಂಗ ಸಮಾವೇಶದಲ್ಲಿ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ರಾಜ್ಯದಲ್ಲಿ ಬೆಲೆ ಏರಿಕೆಯಿಂದ ಜನತೆ ತತ್ತರಿಸಿದ್ದಾರೆ. ಈ ಸಂಕಷ್ಟದಿಂದ ಪಾರುಮಾಡಲು ಯಾತ್ರೆ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ನೀರಾವರಿ ಯೋಜನೆಗಳಿಗೆ ಯಾವುದೇ ಅನುದಾನ ಮೀಸಲಿಟ್ಟಿಲ್ಲ ಎಂದು ಆರೋಪಿಸಿದ್ದಾರೆ.

ಮಾಜಿ ಮುಖ್ಯಮಂತ್ರಿ ಸದಾನಂದ ಗೌಡ ಮಾತನಾಡಿ, ಕರ್ನಾಟಕದ ರಾಜಕೀಯ ಇತಿಹಾಸದಲ್ಲಿ ಅತ್ಯಂತ ಭ್ರಷ್ಟ ಸರ್ಕಾರ ಎಂದರೆ ಅದು ಕಾಂಗ್ರೆಸ್ ಸರ್ಕಾರ ಎಂದು ದೂರಿದ್ದಾರೆ.

ಸಂಜೆ ಚಿಕ್ಕಮಗಳೂರಿನಲ್ಲಿ ಬಿಜೆಪಿ ಸಮಾವೇಶ ಹಮ್ಮಿಕೊಳ್ಳಲಾಗಿದೆ.

ರಾಜ್ಯ ಸರ್ಕಾರದ ತುಷ್ಟಿಕರಣ ನೀತಿ, ಭ್ರಷ್ಟಾಚಾರ, ಬೆಲೆ ಏರಿಕೆ ಹಾಗೂ ಪರಿಶಿಷ್ಟರ ಹಣದ ದುರ್ಬಳಕೆ ವಿರುದ್ಧ ಬಿಜೆಪಿ ಜನಾಕ್ರೋಶ ಯಾತ್ರೆ ಆಯೋಜಿಸಿದ್ದು, ನಾಳೆ ಉತ್ತರಕನ್ನಡ ಜಿಲ್ಲೆಯ ಯಲ್ಲಾಪುರಕ್ಕೆ ಯಾತ್ರೆ ಆಗಮಿಸಲಿದೆ ಎಂದು ಜಿಲ್ಲಾ ಬಿಜೆಪಿ ಅಧ್ಯಕ್ಷ ಎನ್.ಎಸ್.ಹೆಗಡೆ ತಿಳಿಸಿದ್ದಾರೆ.

***************

ನಾಡಿನೆಲ್ಲೆಡೆ ಇಂದು ತ್ಯಾಗ, ಅಹಿಂಸೆಯ ಸಾಕಾರಮೂರ್ತಿ ಭಗವಾನ್ ಮಹಾವೀರ ಜಯಂತಿಯನ್ನು ಆಚರಿಸಲಾಗುತ್ತಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ನಾಡಿನ ಸಮಸ್ತ ಜನರಿಗೆ ಮಹಾವೀರ ಜಯಂತಿಯ ಶುಭಾಶಯ ಕೋರಿದ್ದಾರೆ. ಭಗವಾನ್ ಮಹಾವೀರರ ಚಿಂತನೆಗಳು, ಬದುಕು, ಬೋಧನೆಗಳು ಆಧರಣೀಯ ಎಂದು ತಿಳಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ, ನೆಲಮಂಗಲ ತಾಲೂಕುಗಳಲ್ಲಿ ಜೈನ ಬಾಂಧವರು ಶ್ರದ್ಧಾ ಭಕ್ತಿಯಿಂದ ಮಹಾವೀರ ಜಯಂತಿ ಆಚರಿಸಿದರು. ಮಹಾವೀರ ಜಯಂತಿ ಅಂಗವಾಗಿ ದೊಡ್ಡಬಳ್ಳಾಪುರದ ಮಹಾವೀರ ಜೈನ್ ಶ್ವೇತಾಂಬರ್ ಮಂದಿರ ಹಾಗೂ ದೇವನಹಳ್ಳಿಯ ನಾಕೋಡ ಜೈನ ಮಂದಿರಗಳಲ್ಲಿ ವಿಶೇಷ ಅಲಂಕಾರ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.

ದಾವಣಗೆರೆಯಲ್ಲಿ ಜಿಲ್ಲಾಡಳಿತ ಭವನದಲ್ಲಿಂದು ಭಗವಾನ್ ಮಹಾವೀರ ಜಯಂತಿಯನ್ನು ಆಚರಿಸಲಾಯಿತು. ಹೆಚ್ಚುವರಿ ಜಿಲ್ಲಾಧಿಕಾರಿ ಲೋಕೇಶ್, ಮಹಾವೀರರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಜಗತ್ತಿಗೆ ಮಹಾವೀರರು ನೀಡಿದ ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಸಲಹೆ ನೀಡಿದರು.

ಸಮಾಜವನ್ನು ಸತ್ಯ ಮತ್ತು ಶಾಂತಿಯ ಕಡೆ ಕೊಂಡೊಯ್ದ ಮಹಾನ್ ಚೇತನ ವರ್ಧಮಾನ ಮಹಾವೀರ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಹೇಳಿದ್ದಾರೆ. ನಗರದ ಜೈನ ಬೀದಿಯಲ್ಲಿ ನಡೆದ ಮಹಾವೀರ ಜಯಂತಿಯ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದ ಅವರು, ಮಹಾವೀರರ ತತ್ವ, ಮೌಲ್ಯ ಮತ್ತು ಅವರು ಬೋಧಿಸಿದ ೫ ಪಂಚಶೀಲ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಸಮಾಜದಲ್ಲಿ ಸಹಬಾಳ್ವೆಯಿಂದ ಜೀವನ ನಡೆಸಬಹುದು ಎಂದು ಕರೆ ನೀಡಿದರು.

***************

ಹುಬ್ಬಳ್ಳಿ ನಗರದಲ್ಲಿ ಮೇಲ್ಸೇತುವೆ ಕಾಮಗಾರಿ ಪ್ರಗತಿಯಲ್ಲಿದ್ದು, ಈಗಾಗಲೇ ಶೇಕಡ ೫೦ರಷ್ಟು ಕಾಮಗಾರಿ ಮುಕ್ತಾಯಗೊಂಡಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಸ್ಪಷ್ಟಪಡಿಸಿದ್ದಾರೆ.

ಹುಬ್ಬಳ್ಳಿ ನಗರದ ಚನ್ನಮ್ಮ ವೃತ್ತ, ಹಳೇ ಕೋರ್ಟ್ ವೃತ್ತ, ಇಂದಿರಾ ಗಾಜಿನ ಮನೆ ವೃತ್ತದಲ್ಲಿ ಪ್ರಗತಿಯಲ್ಲಿರುವ ಮೇಲ್ಸೆತುವೆ ಕಾಮಗಾರಿ ಪರಿಶೀಲಿಸಿ ಮಾತನಾಡಿದ ಅವರು, ಉಳಿದ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಎಲ್ಲರ ಸಹಕಾರ ಅವಶ್ಯವಾಗಿದೆ ಎಂದು ಹೇಳಿದ್ದಾರೆ.

ಕಾಮಗಾರಿ ಹಿನ್ನೆಲೆಯಲ್ಲಿ ೪ ತಿಂಗಳ ಕಾಲ ನಗರ ಸಾರಿಗೆ ನಿಲ್ದಾಣವನ್ನು ಸಂಪೂರ್ಣವಾಗಿ ಬಂದ್ ಮಾಡಲಾಗುವುದು. ಟ್ರಾಫಿಕ್ ಸಮಸ್ಯೆಯಾಗದಂತೆ ನೋಡಿಕೊಳ್ಳಲು ಪೊಲೀಸ್ ಇಲಾಖೆಗೆ ಸೂಚಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

****ಧ್ವನಿ *** ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ

***************

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿರುವ ಐಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ಇಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭:೩೦ಕ್ಕೆ ಆರಂಭವಾಗಲಿದೆ.

ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಆಡಿರುವ ನಾಲ್ಕು ಪಂದ್ಯಗಳಲ್ಲಿ ಮೂರು ಪಂದ್ಯ ಗೆದ್ದು, ಉತ್ತಮ ಆರಂಭ ಮಾಡಿದೆ. ಇಂದು ತವರಿನಲ್ಲಿ ಗೆಲುವಿನ ಖಾತೆ ತೆರೆಯುವ ತವಕದಲ್ಲಿದೆ.

ಕ್ರಿಕೆಟ್ ಪಂದ್ಯ ನಡೆಯುತ್ತಿರುವ ಹಿನ್ನೆಲೆಯಲ್ಲಿ ಮೆಟ್ರೋ ರೈಲು ಸೇವೆಯ ಸಮಯವನ್ನು ರಾತ್ರಿ ೧೨.೩೦ರ ವರೆಗೆ ವಿಸ್ತರಿಸಲಾಗಿದೆ.

ನಾಡಪ್ರಭು ಕೆಂಪೇಗೌಡ ನಿಲ್ದಾಣದಿಂದ ನಾಲ್ಕು ದಿಕ್ಕುಗಳ ಕಡೆಗೆ ಕೊನೆಯ ರೈಲು ಮಧ್ಯರಾತ್ರಿ ೧.೧೫ಕ್ಕೆ ಹೊರಡಲಿದೆ.

ಬಿಎಂಟಿಸಿಯಿಂದಲೂ ವಿಶೇಷ ಬಸ್ ವ್ಯವಸ್ಥೆ ಮಾಡಲಾಗಿದೆ.

****************

ರಾಜ್ಯದ ಹಲವೆಡೆ ಮಳೆಯಾಗಿದೆ. ಮುಂದಿನ ೫ ದಿನಗಳ ಕಾಲ ಹಲವೆಡೆ ಗುಡುಗು, ಮಿಂಚು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

ಬೆಂಗಳೂರಿನಲ್ಲಿ ಇಂದು ಮತ್ತು ನಾಳೆ ಹಗುರ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ. ಸಿ.ಎಸ್. ಪಾಟೀಲ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ **** ಡಾ. ಸಿ.ಎಸ್. ಪಾಟೀಲ್

ರಾಜ್ಯದಲ್ಲಿ ಅತಿ ಹೆಚ್ಚು ಉಷ್ಣಾಂಶ ವಿಜಯಪುರದಲ್ಲಿ ೩೮.೫ ಡಿಗ್ರಿ ಸೆಲ್ಷಿಯಸ್ ದಾಖಲಾಗಿದೆ.

********ಮುಕ್ತಾಯ********